# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಕ್ಷಿಣ ವಲಯ

**ಬೈರಸಂದ್ರ , ಹೊಸ ವಾರ್ಡ ಸಂಖ್ಯೆ: 196 (ಹಳೆಯ ವಾರ್ಡ ಸಂಖ್ಯೆ: 168 & 169)**

**ದಿನಾಂಕ: 23.11.2022 ರಂದು ಹೊಸ ವಾರ್ಡ ಸಂಖ್ಯೆ 196 ಬೈರಸಂದ್ರ ವಾರ್ಡನಲ್ಲಿ ನಡೆದ ವಾರ್ಡ ಸಮಿತಿ ಸಭೆ:**

## –: ಸಮಿತಿ ಸಭೆಯ ನಡವಳಿಗಳು :–

ವಾರ್ಡ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಮತ್ತು ವಾರ್ಡ ಸಮಿತಿ ಸದಸ್ಯರು:–

| ಕ್ರ.ಸಂ | ಹೆಸರು | ಹುದ್ದೆ |
|---|---|---|
| 01 | ಶ್ರೀ ವಾಲು ರಾಥೋಡ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 02 | ಶ್ರೀ ಚಂದ್ರಶೇಖರ್ ವಿ | ಕಾರ್ಯಾದರ್ಶಿ ಮತ್ತು ಸಂಚಾಲಕರು |
| 03 | ಶ್ರೀ ರಾಮಚಂದ್ರ .ಸಿ | ಹಿರಿಯ ಆರೋಗ್ಯ–168 ನಿರೀಕ್ಷಕರು, ಬಿ.ಬಿ.ಎಂ.ಪಿ |
| 04 | ಶ್ರೀ ವಿಜಯಕುಮಾರ.ಎಂ.ಬಿ | ಸಹಾಯಕ ಅಭಿಯಂತರರು–ಯೋಜನೆ(ದಕ್ಷಿಣ) |
| 05 | ಶ್ರೀ ಸತೀಶ್.ಸ್ | BWSSB, ಜಯನಗರ |
| 06 | ಶ್ರೀ ಶಿವರಾಜ | ASI Traffic Mico station |
| 07 | ಶ್ರೀ ನಾಗರಾಜ.ಎ.ಕೆ | ಜಯನಗರ PC |
| 08 | ಶ್ರೀ ವಿಜಯ್ ಹೆಚ್.ಬಿ | ಸ.ಅ, BESCOM ಜಯನಗರ |
| 09 | ಶ್ರೀಮತಿ ಡಾ. ಹಲೀಮ್ ಸಾರ | MO-168, ಆರೋಗ್ಯ ಇಲಾಖೆ, ಬಿ.ಬಿ.ಎಂ.ಪಿ |
| 10 | ಕುಮಾರಿ ಶಮಿನಾ ಭಾನು | ತಿಲಕ್‌ನಗರ PC |
| 11 | ಕುಮಾರಿ ವಿಶಾಲಕ್ಷಿ ಬಂಡಿ | ಸಹಾಯಕ ಅಭಿಯಂತರರು ವಾರ್ಡ –168 |
| 12 | ವಾರ್ಡ 196 ರ L.I.C ಕಾಲೋನಿ ಸ್ಥಳಿಯ ನಿವಾಸಿಗಳ ಸಂಘ ಹಾಗೂ 4ನೇ ಟಿ ಬ್ಲಾಕ್‌ನ ಸ್ಥಳಿಯ ನಿವಾಸಿಗಳ ಸಂಘ ಮತ್ತು ಸಾರ್ವಜನಿಕರು | |

ವಾರ್ಡ ಸಮಿತಿ ಅದ್ಯಕ್ಷರು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಸ್ವಾಗತ ಕೋರುತ್ತಾ , ಸಭೆಯನ್ನು ಪ್ರಾರಂಭಿಸಿದರು.

1. ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ ದಿನಾಂಕ 10.11.2022 ರಂದು ಸಾರ್ವಜನಿಕರು ತಿಳಿಸಿದ ಸಮಸ್ಯೆಗಳ ಬಗ್ಗೆ ಹಾಗೂ ಅಧಿಕಾರಿಗಳು ತೆಗೆದುಕೊಂಡ ಕ್ರಮದ ಮಾಹಿತಿ ಪಡೆದುಕೊಂಡರು.

2. ಹಳೆಯ ವಾರ್ಡ ಸಂಖ್ಯೆ 169 ರಲ್ಲಿರುವ 10ನೇ ಅಡ್ಡರಸ್ತೆಯಲ್ಲಿ Shoulder drain ಮಾಡಿದ್ದು, ಆದರೆ Shoulder drain ಗಳಿಗೆ Steel Grating ಅಳವಡಿಸಿರುದಿಲ್ಲ ಮತ್ತು ಇನ್ನು ಅನೇಕ ಕಡೆ Shoulder drain ನಿರ್ಮಾಣ ಮಾಡುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, SWD (South), ಬಿ.ಬಿ.ಎಂ.ಪಿ)**

3. LIC ಕಾಲೋನಿನಲ್ಲಿರುವ 3ನೇ ಅಡ್ಡರಸ್ತೆ ಮತ್ತು 5ನೇ ಅಡ್ಡರಸ್ತೆ ನಲ್ಲಿರುವ ಮರದ ಉದ್ದವಾಗಿರುವ ಕೊಂಬೆಗಳು ಬೀಳುವ ಸ್ಥಿತಿಯಲ್ಲಿದ್ದು. ಸದರಿ ರಸ್ತೆಗಳಲ್ಲಿರುವ ಮರದ ಕೊಂಬೆಗಳನ್ನು ಕತ್ತರಿಸುವಂತೆ ಸಭೆಯಲ್ಲಿ ಕೋರಿದರು. **(ಅರಣ್ಯ ಇಲಾಖೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

Scanned with OKEN Scanner

4. ಹಳೆಯ ವಾರ್ಡ ಸಂಖ್ಯೆ 168 ರಲ್ಲಿರುವ 28ನೇ ಮುಖ್ಯರಸ್ತೆಯ (ವಿಷ್ಣುವರ್ಧನ್ ಪಾರ್ಕನ) ರಸ್ತೆಯ ಎರಡು ಬದಿ ವಾಹನಗಳನ್ನು ನಿಲ್ಲಿಸುವುದರಿಂದ ವಾಹನ ಓಡಡಲು ತುಂಬಾ ತೊಂದರೆಯಾಗುತ್ತಿದ್ದು, ಇದರ ಬಗ್ಗೆ ಕ್ರಮ ವಹಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಮೈಕೊ ಲೇಔಟ್ ಸಂಚಾರ ಪೋಲಿಸ್ ಠಾಣೆ)**

5. ಹಳೆಯ ವಾರ್ಡ ಸಂಖ್ಯೆ 169 ರಲ್ಲಿರುವ 10ನೇ ಅಡ್ಡರಸ್ತೆಯಲ್ಲಿ Strom water drain (SWD) ಮೇಲೆ ವಾಹನಗಳನ್ನು ಪಾರ್ಕ ಮಾಡುತ್ತಿದ್ದು. ಇದರಿಂದ ಪಾದಚಾರಿ ಮಾರ್ಗದ ಮೇಲೆ ಸಾರ್ವಜನಿಕರು ಓಡಾಡಲು ತುಂಬಾ ತೊಂದರೆಯಾಗುತ್ತಿದ್ದು. ಇದರ ಬಗ್ಗೆ ಕ್ರಮ ವಹಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಮೈಕೊ ಲೇಔಟ್ ಸಂಚಾರ ಪೋಲಿಸ್ ಠಾಣೆ)**

6. ಜಯನಗರ 4ನೇ 'ಟಿ' ಬ್ಲಾಕ್‌ನಲ್ಲಿರುವ ವಿಷ್ಣುವರ್ಧನ್ ಪಾರ್ಕನಲ್ಲಿ ಹೊಸದಾಗಿ ಮಳೆ ನೀರಿನ ಇಂಗು ಗುಂಡಿ (Rain water Harvesting pits) ಅನ್ನು ನಿರ್ಮಿಸಲು ಸಭೆಯಲ್ಲಿ ಕೋರಿದರು. **(ತೋಟಗಾರಿಕೆ ಇಲಾಖೆ (ದಕ್ಷಿಣ) ಮತ್ತು ಯೋಜನೆ(ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

7. LIC Colony ಮತ್ತು ಜಯನಗರ 4ನೇ 'ಟಿ' ಬ್ಲಾಕ್‌ನಲ್ಲಿರುವ ವಿಷ್ಣುವರ್ಧನ್ ಪಾರ್ಕನಲ್ಲಿರುವ ಬೀದಿ ದೀಪಗಳು, ಗೊಂಬೆಗಳು ಮತ್ತು Music System ಹಾಳಾಗಿದ್ದು. ಬೀದಿ ದೀಪಗಳು ಇಲ್ಲದೆ ಇರುವುದರಿಂದ ಸಂಜೆ ಮತ್ತು ಮುಂಜಾನೆ ಸಮಯದಲ್ಲಿ ಸಾರ್ವಜನಿಕರಿಗೆ ಓಡಡಲು ತೊಂದರೆಯಾಗುತ್ತಿದ್ದು. ಕೂಡಲೇ ಬೀದಿ ದೀಪಗಳನ್ನು ಅಳವಡಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ವಿದ್ಯುತ್ (ದಕ್ಷಿಣ) ಇಲಾಖೆ, ಜಯನಗರ, ಬಿ.ಬಿ.ಎಂ.ಪಿ ಮತ್ತು ತೊಟಗಾರಿಕೆ (ದಕ್ಷಿಣ) ಇಲಾಖೆ ಜಯನಗರ)**

8. ವಾರ್ಡ ಸಂಖ್ಯೆ 168ರ ವ್ಯಾಪ್ತಿಯಲ್ಲಿರುವ ಜಯನಗರ 4ನೇ 'ಟಿ' ಬ್ಲಾಕ್‌ನ 32ನೇ 'ಇ' ಅಡ್ಡರಸ್ತೆಯಲ್ಲಿ ವಾರಸುದಾರರಿಲ್ಲದ (ಬಿಡಾಡಿ) ವಾಹನಗಳಿದ್ದು. ಸದರಿ ವಾಹನಗಳನ್ನು ತೆರೆವುಗೊಳ್ಳಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ಜಯನಗರ ಉಪ-ವಿಭಾಗ ಬಿ.ಬಿ.ಎಂ.ಪಿ & ಕ್ರಮ: ಮೈಕೊ ಲೇಔಟ್ ಸಂಚಾರ ಪೋಲಿಸ್ ಠಾಣೆ)**

9. LIC Colony ಯಲ್ಲಿನರುವ ನಿವೇಶನಗಳಿಂದ ಬರುವ ಕಸದ ಪ್ರಮಾಣವು ಹೆಚ್ಚಾಗುತ್ತಿದ್ದು, ಕಸ ವಿಲೇವಾರಿ ಮಾಡಲು ತುಂಬಾ ತೋಂದರೆಯಾಗುತಿರುತ್ತದೆ. ಆದ್ದರಿಂದ ಕಸವನ್ನು ವಿಲೇವಾರಿ ಮಾಡುವ ಸದರಿ ವಾಹನದ ಜೊತೆಗೆ ಇನ್ನೋಂದು ಹೆಚ್ಚುವರಿ ವಾಹನವನ್ನು ನೀಡಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, SWM ಜಯನಗರ, ಬಿ.ಬಿ.ಎಂ.ಪಿ)**

10. LIC Colony ಮತ್ತು ಜಯನಗರ 4ನೇ 'ಟಿ' ಬ್ಲಾಕ್‌ನಲ್ಲಿರುವ ವಿಷ್ಣುವರ್ಧನ್ ಪಾರ್ಕ್‌ನಲ್ಲಿ ಸೊಳ್ಳೆಗಳು ತುಂಬಾ ಹೆಚ್ಚಾಗಿದ್ದು , ಪಾರ್ಕ್‌ಗಳಲ್ಲಿನ ಸೊಳ್ಳೆಗಳನ್ನು ನಿಯಂತ್ರಿಸಲು ಸೊಳ್ಳೆ ಔಷದಿಯನ್ನು ಸಿಂಪಡಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಆರೋಗ್ಯಾಧಿಕಾರಿಗಳು, ಬಿ.ಬಿ.ಎಂ.ಪಿ ಜಯನಗರ)**

Scanned with OKEN Scanner

11. ವಾರ್ಡ ಸಂಖ್ಯೆ 168ರ ವ್ಯಾಪ್ತಿಯಲ್ಲಿರುವ LIC ಕಾಲೋನಿಯಲ್ಲಿನ ರಸ್ತೆ ಬಂದಿ ಚರಂಡಿಯಲ್ಲಿನ ಹೂಳು ತೆಗೆಯುವುದು ಮತ್ತು G.H ಲೇಔಟ್‌ನಲ್ಲಿ ರಸ್ತೆ ಬಂದಿ ಚರಂಡಿಯನ್ನು ಹೊಸದಾಗಿ ನಿರ್ಮಾಣ ಮಾಡಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ಜಯನಗರ ಉಪ-ವಿಭಾಗ ಬಿ.ಬಿ.ಎಂ.ಪಿ)**

**ನಿರ್ಣಯ:** ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ವರದಿ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಚಂದ್ರಶೇಖರ್.ವಿ)
ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಮಿತಿ ಸಭೆ
ಹೊಸ ವಾರ್ಡ-196 ಬೈರಸಂದ್ರ (ಹಳೆಯ ವಾರ್ಡ 168&169)

(ಶ್ರೀ ವಾಲು ರಾಥೋಡ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ ಸಭೆ
ಹೊಸ ವಾರ್ಡ-196 ಬೈರಸಂದ್ರ (ಹಳೆಯ ವಾರ್ಡ 168&169)

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
2. ಮಾನ್ಯ ವಲಯ ಆಯುಕ್ತರು (ದಕ್ಷಿಣ), ಬಿ.ಬಿ.ಎಂ.ಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಕಛೇರಿ ಕಡತಕ್ಕೆ.

Scanned with OKEN Scanner